# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಗೋವಿಂದ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 256 (322)
ಉತ್ತರಿಸುವ ಸಚಿವರು : ಕಂದಾಯ ಸಚಿವರು
ಉತ್ತರಿಸಬೇಕಾದ ದಿನಾಂಕ : 07.07.2023

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ನಾಡಪ್ರಭು ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯಚಟುವಟಿಕೆಗಳೇನು: | ಬೆಂಗಳೂರಿನ ಅಭಿವೃದ್ಧಿಗಾಗಿ ನಾಡಪ್ರಭು ಕೆಂಪೇಗೌಡರ ಶ್ರಮವನ್ನು ಪರಿಗಣಿಸಿ, ಕೆಂಪೇಗೌಡ ಪಾರಂಪರಿಕ ತಾಣಗಳು, ಪ್ರವಾಸೋದ್ಯಮ ಸ್ಥಳಗಳು ಮತ್ತು ಸ್ಮಾರಕಗಳನ್ನು ಸಂರಕ್ಷಿಸಲು ಮತ್ತು ಅಭಿವೃದ್ಧಿಪಡಿಸಲು ಹಾಗೂ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಬೆಂಗಳೂರು ನಗರದಲ್ಲಿ ಮತ್ತು ಸುತ್ತಮುತ್ತಲಲ್ಲಿ ಬೆಂಗಳೂರು ಕಂದಾಯ ವಿಭಾಗದ ಗ್ರಾಮಾಂತರ, ಚಿಕ್ಕಬಳ್ಳಾಪುರ, ರಾಮನಗರ ಮತ್ತು ತುಮಕೂರು ಜಿಲ್ಲೆಗಳಲ್ಲಿನ ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣಗಳು, ಪ್ರವಾಸೋದ್ಯಮ ಸ್ಥಳಗಳು ಮತ್ತು ಸ್ಮಾರಕಗಳನ್ನು ಅಂತರಾಷ್ಟ್ರೀಯ ಪಾರಂಪರಿಕ, ಸಾಂಸ್ಕೃತಿಕ ಮತ್ತು ಪ್ರವಾಸೀ ಕೇಂದ್ರವಾಗಿ ಅಭಿವೃದ್ಧಿಪಡಿಸಲು ಮತ್ತು ನಿರ್ವಹಿಸುವ ಸಲುವಾಗಿ ಪ್ರಾಧಿಕಾರವನ್ನು ಸ್ಥಾಪಿಸಲಾಗಿರುತ್ತದೆ. |
| ಆ) | ಪ್ರಸ್ತುತ ಪ್ರಾಧಿಕಾರಕ್ಕೆ ಎಷ್ಟು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆ; ಇದಕ್ಕೆ ಸರ್ಕಾರ ನಿಗದಿಪಡಿಸಿರುವ ಅನುದಾನವೆಷ್ಟು; ಆಯವ್ಯಯದಲ್ಲಿ ನಿಗದಿಪಡಿಸಿರುವ ಅನುದಾನದಲ್ಲಿ ಎಷ್ಟು ಅನುದಾನವನ್ನು ಬಳಸಿಕೊಳ್ಳಲಾಗಿದೆ: (ಪೂರ್ಣ ವಿವರಗಳನ್ನು ಒದಗಿಸುವುದು) | ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣದ ಅಭಿವೃದ್ಧಿ ಪ್ರಾಧಿಕಾರಕ್ಕೆ ಒಟ್ಟು 8 ಹುದ್ದೆಗಳನ್ನು ಸೃಜಿಸಲಾಗಿದೆ. ಇದರಲ್ಲಿ ನಿಯೋಜನೆ ಮೇಲೆ ಆಯುಕ್ತರು, ತಹಶೀಲ್ದಾರ್, ಲೆಕ್ಕಾಧೀಕ್ಷಕರು /ಲೆಕ್ಕಪರಿಶೋಧನಾಧಿಕಾರಿಗಳ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಶೀಘ್ರಲಿಪಿಗಾರರ ಎದುರಾಗಿ ಹೊರಗುತ್ತಿಗೆ ಆಧಾರದ ಮೇಲೆ ಆಯುಕ್ತರ ಆಪ್ತ ಸಹಾಯಕರನ್ನು ದಿನಾಂಕ:06.07.2021ರ ಪ್ರಾಧಿಕಾರದ 5ನೇ ಸಭೆಯ ನಡವಳಿಯ ಪ್ರಕಾರ ಪಡೆಯಲಾಗಿದೆ. DEO-1, D-Group-1, ಒಟ್ಟು 6 ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ. ಹೊರಗುತ್ತಿಗೆ ಆಧಾರದ ಮೇಲೆ Security Guard-4, House Keeping-2 ಆಯುಕ್ತರು ನೇಮಿಸಿಕೊಂಡಿರುತ್ತಾರೆ.<br><br>2016-17 ರಲ್ಲಿ ರೂ.250.00 ಲಕ್ಷಗಳು, 2017-18 ರಲ್ಲಿ ರೂ.125.00 ಲಕ್ಷಗಳು, 2018-19 ರಲ್ಲಿ ರೂ.50.00 ಲಕ್ಷಗಳು ಹಾಗೂ 2018-19ರಲ್ಲಿ ಮುಖ್ಯಮಂತ್ರಿಗಳ ನವನಗರೋತ್ಥಾನ ಯೋಜನೆಯಡಿ ಕೆಂಪೇಗೌಡ ಪ್ರತಿಷ್ಠಾನಕ್ಕೆ ರೂ.100.00 ಕೋಟಿಗಳ ಅನುದಾನವನ್ನು ಮೀಸಲಿರಿಸಿದ್ದು, ಸದರಿ ಮೊತ್ತದಲ್ಲಿ ಪ್ರಾಧಿಕಾರದ ವರ್ಷವಾರು ವೆಚ್ಚಗಳನ್ನು ಭರಿಸಲಾಗುತ್ತಿದೆ. 2020-21 ರಿಂದ ಜೂನ್ 2023 ರವರೆಗೆ ಪ್ರಾಧಿಕಾರದ ಅಧಿಕಾರಿಗಳ ಒಟ್ಟು ವೇತನಕ್ಕೆ ರೂ.66,69,705/-ಮತ್ತು ಹೊರಗುತ್ತಿಗೆ ನೌಕರರ ವೇತನಕ್ಕಾಗಿ ಒಟ್ಟು ರೂ.53,46,944/-ಗಳು ಖರ್ಚಾಗಿರುತ್ತದೆ. |
| ಇ) | ಕೆಂಪೇಗೌಡ ವಸ್ತು ಸಂಗ್ರಹಾಲಯ ಇರುವ ಸ್ಥಳ ಯಾವುದು ಹಾಗೂ ಪ್ರಸ್ತುತ ಈ ಸಂಗ್ರಹಾಲಯ ಸಾರ್ವಜನಿಕರ ವೀಕ್ಷಣೆಗೆ ಮುಕ್ತವಾಗಿದೆಯೇ: | ಕೆಂಪೇಗೌಡ ವಸ್ತು ಸಂಗ್ರಹಾಲಯವು ಮೆಯೋಹಾಲ್, ಎಂ.ಜಿ. ರಸ್ತೆ, ಬೆಂಗಳೂರು ಇಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಪ್ರಸ್ತುತ ಸಂಗ್ರಹಾಲಯವು ದುರಸ್ಥಿಯಲ್ಲಿದ್ದರೂ ಸಹ ಸಾರ್ವಜನಿಕರ ವೀಕ್ಷಣೆಗೆ ಅನುವು ಮಾಡಿಕೊಡಲಾಗುತ್ತಿದೆ. |
| ಈ) | ಹಾಗಿದ್ದಲ್ಲಿ, ಇದುವರೆಗೂ ಎಷ್ಟು ಸಾರ್ವಜನಿಕರು ಈ ಸ್ಥಳಕ್ಕೆ ಭೇಟಿ ನೀಡಿದ್ದಾರೆ: ಪ್ರವೇಶ ಶುಲ್ಕವನ್ನು ನಿಗದಿಪಡಿಸಿ ವಿಧಿಸಲಾಗುತ್ತಿದೆಯೇ? | ಒಟ್ಟು 21 ಸಾರ್ವಜನಿಕರು, ಸಂಘ-ಸಂಸ್ಥೆ, ಶಾಲಾ-ಕಾಲೇಜುಗಳಿಂದ ಸಂಗ್ರಹಾಲಯಕ್ಕೆ ಭೇಟಿ ನೀಡಿರುತ್ತಾರೆ. ಈ ತಹಲ್‌ವರೆವಿಗೂ ಪ್ರಸ್ತುತ ಸಂಗ್ರಹಾಲಯ ವೀಕ್ಷಣೆಗೆ ಯಾವುದೇ ಪ್ರವೇಶ ಶುಲ್ಕವನ್ನು ವಿಧಿಸುತ್ತಿರುವುದಿಲ್ಲ. |

ಸಂಖ್ಯೆ: ಕಂಇ 96 ಆರ್‌ಬಿಎ 2023

(ಕೃಷ್ಣ
ಬೈರೇಗೌಡ)
ಕಂದಾಯ
ಸಚಿವರು

ಕೃಷ್ಣ ಬೈರೇಗೌಡ
ಕಂದಾಯ ಸಚಿವರು